1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಿಕ್ಕಮಗಳೂರು

<u>ವಿಶೇಷ ಮೊಕದ್ದಮೆ ನಂಃ **83/2020**</u>

| | | |
|---|---|---|
| ಸಾಕ್ಷಿದಾರರ ಹೆಸರು | - ರೇಣುಕಪ್ರಸಾದ | ಪಿಡಬ್ಲೂ - 10 |
| ತಂದೆಯ ಹೆಸರು | - ಲೇಟ್ ಯಲ್ಲಪ್ಪ | ಸಿಡಬ್ಲೂ - 12 |
| ವಯಸ್ಸು | - 52 ವರ್ಷ | |
| ಉದ್ಯೋಗ | - ಡಿ ವೈ ಎಸ್ ಪಿ , ಎಸ್.ಸಿ.ಆರ್.ಬಿ., ಬೆಂಗಳೂರು | |
| ವಾಸ ಸ್ಥಳ | - ಬೆಂಗಳೂರು | |

ದಿನಾಂಕಃ 21-11-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

<u>ಮುಖ್ಯ ವಿಚಾರಣೆ ವಿಶೇಷ ಸರ್ಕಾರಿ ಅಭಿಯೋಜಕರಿಂದ -</u>

1. ದಿನಾಂಕಃ 20-07-2019 ರಿಂದ ದಿನಾಂಕಃ 30-11-2020 ರವರೆಗೆ ನಾನು ತರೀಕೆರೆ ಉಪ ವಿಭಾಗದ ಡಿ.ವೈ.ಎಸ್.ಪಿ. ಯಾಗಿ ಕಾರ್ಯ ನಿರ್ವಹಿಸಿದ್ದೇನೆ .

2. ಈ ಪ್ರಕರಣದ ತನಿಖೆಯನ್ನು ನಡೆಸಲು ಚಿಕ್ಕಮಗಳೂರು ಪೊಲೀಸ್ ವರಿಷ್ಟಾಧಿಕಾರಿಗಳು ದಿಃ 07-05-2020 ರಂದು ನನಗೆ ಆದೇಶಿಸಿದ್ದು, ಸದರಿಯವರ ಆದೇಶವನ್ನು ಅದೇ ದಿನ ಪಡೆದುಕೊಂಡಿರುತ್ತೇನೆ. ಸದರಿ ಆದೇಶವನ್ನು ನೋಡುತ್ತಿದ್ದು, ಅದನ್ನು ನಿ.ಪಿ.12 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ.12(ಎ) ಎಂದು ಗುರುತಿಸಲಾಯಿತು. ಅದೇ ದಿನ ನಾನು ಈ ಪ್ರಕರಣದ ಕಡತವನ್ನು ಪ್ರಾಸಾ.9 ರವರಿಂದ ಪಡೆದು ಪರಿಶೀಲಿಸಿರುತ್ತೇನೆ.

3. ಅದೇ ದಿನ ಕೆಂಚಿಕೊಪ್ಪ ಗ್ರಾಮದ ಸರಹದ್ದಿನಲ್ಲಿ ಕೃತ್ಯ ನಡೆದಿದ್ದ ಸ್ಥಳಕ್ಕೆ ಭೇಟಿ ನೀಡಿರುತ್ತೇನೆ. ಸದರಿ ಸ್ಥಳಕ್ಕೆ ಪ್ರಾಸಾ-2 ಮತ್ತು 3 ರವರಿಗೆ ನೋಟೀಸನ್ನು ಜಾರಿ ಮಾಡಿ ಪಂಚರನ್ನಾಗಿ ಬರಮಾಡಿಕೊಂಡಿರುತ್ತೇನೆ. ಸದರಿ ನೋಟೀಸನ್ನು ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ.4 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.4(ಬಿ) ಎಂದು ಗುರುತಿಸಲಾಯಿತು. ಸದರಿ ಸ್ಥಳದಲ್ಲಿ ಹಾಜರಿದ್ದ ಪ್ರಾಸಾ.1 ರವರು

ತೋರಿಸಿದ ಮೇರೆಗೆ ಮೇಲೆ ಹೇಳಿದ ಪಂಚರ ಸಮಕ್ಷಮ ಬೆಳಗ್ಗೆ 11 ರಿಂದ 11.45 ಗಂಟೆಯವರೆಗೆ ಪಂಚನಾಮೆಯನ್ನು ಜರುಗಿಸಿರುತ್ತೇನೆ. ಸದರಿ ಪಂಚನಾಮೆಯನ್ನು ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ.2 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.2(ಡಿ) ಎಂದು ಗುರುತಿಸಲಾಯಿತು. ಸದರಿ ಪಂಚನಾಮೆಯ ಕಾಲಕ್ಕೆ ಫ್ರಾಸಾ.1 ರವರು ಒಂದು ಅಡಿಕೆ ದಬ್ಬೆಯನ್ನು ಹಾಜರುಪಡಿಸಿದ ಅದನ್ನು ಆರೋಪಿತರು ಕೃತ್ಯಕ್ಕೆ ಬಳಸಿದ್ದಾಗಿ ತಿಳಿಸಿರುತ್ತಾರೆ. ಸದರಿ ದಬ್ಬೆಯನ್ನು ಮೇಲೆ ಹೇಳಿದ ಪಂಚರ ಸಮಕ್ಷಮ ಅಮಾನತುಪಡಿಸಿಕೊಂಡಿರುತ್ತೇನೆ. ಸದರಿ ದಬ್ಬೆಯನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ಈಗಾಗಲೇ ಮು.ಮಾ.1 ಎಂದು ಗುರುತಿಸಲ್ಪಟ್ಟಿರುವ ಅಡಿಕೆ ದಬ್ಬೆ ಮತ್ತು ಅದರ ಮೇಲೆ ಅಂಟಿಸಲಾಗಿರುವ ಚೀಟಿಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಸಹಿಯನ್ನು ಮು.ಮಾ.1(ಸಿ) ಎಂದು ಗುರುತಿಸಲಾಯಿತು. ಸದರಿ ಪಂಚನಾಮೆಯ ಕಾಲಕ್ಕೆ ಫೋಟೋವನ್ನು ತೆಗೆಸಿರುತ್ತೇನೆ. ಸದರಿ ಫೋಟೋವನ್ನು ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ.3 ಎಂದು ಗುರುತಿಸಲಾಗಿದೆ. ಠಾಣೆಗೆ ಹಿಂತಿರುಗಿ ಮೇಲೆ ಹೇಳಿದ ಅಡಿಕೆ ದಬ್ಬೆಯನ್ನು ಮಾಲುಪಟ್ಟಿ ಸಂಃ 39/2020 ರಲ್ಲಿ ಅಳವಡಿಸಿಕೊಂಡು ನ್ಯಾಯಾಲಯಕ್ಕೆ ಸಲ್ಲಿಸಿಕೊಂಡಿರುತ್ತೇನೆ. ಸದರಿ ಮಾಲುಪಟ್ಟಿಯನ್ನು ನೋಡುತ್ತಿದ್ದು, ಅದನ್ನು ನಿಪಿ.13 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.13(ಎ) ಎಂದು ಗುರುತಿಸಲಾಯಿತು. ನಂತರ ಠಾಣೆಯಲ್ಲಿ ಫ್ರಾಸಾ-1 ರವರ ಮುಂದುವರೆದ ಹೇಳಿಕೆಯನ್ನು ಮತ್ತು ಫ್ರಾಸಾ.4 ರಿಂದ 7 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ಫ್ರಾಸಾ.5 ರಿಂದ 7 ರವರು ನಿಪಿ.5 ರಿಂದ ಪಿ.7 ರಂತೆ ನನ್ನ ಮುಂದೆ ಹೇಳಿಕೆಗಳನ್ನು ನೀಡಿರುತ್ತಾರೆ.

4. ತನಿಖಾ ಕಾಲದಲ್ಲಿ ನನ್ನ ಆದೇಶದ ಮೇರೆಗೆ ಲಕ್ಕವಳ್ಳಿ ಪೊಲೀಸ್ ಠಾಣೆ ಯ ಮುಖ್ಯ ಪೇದೆ-74 ಪುರುಷೋತ್ತಮರವರು ಇಲಾಖಾವತಿಯಿಂದ ನೀಡಲಾಗಿದ್ದ ಕ್ಯಾಮೆರದಲ್ಲಿ ಫೋಟೋಗಳನ್ನು ತೆಗೆದು ವಿಡಿಯೋವನ್ನು

ಚಿತ್ರೀಕರಿಸಿರುತ್ತಾರೆ. ನಂತರ ಸದರಿಯವರು ನನ್ನ ಆದೇಶದಂತೆ ಸದರಿ ಫೋಟೋ ಮತ್ತು ವಿಡಿಯೋವನ್ನು ಕಛೇರಿಯಲ್ಲಿದ್ದ ಕಂಪ್ಯೂಟರಿಗೆ ವರ್ಗಾಯಿಸಿ ನಂತರ ಅವುಗಳನ್ನು ಒಂದು ಖಾಲಿ ಡಿ.ವಿ.ಡಿ. ಗೆ ವರ್ಗಾಯಿಸಿ ನೀಡಿರುತ್ತಾರೆ ಮತ್ತು ಆ ಬಗ್ಗೆ ಭಾರತೀಯ ಸಾಕ್ಷ್ಯ ಅಧಿನಿಯಮ 65(ಬಿ) ಅಡಿಯಲ್ಲಿ ದೃಢೀಕರಣ ಪತ್ರವನ್ನು ನೀಡಿರುತ್ತಾರೆ. ಸದರಿ ದೃಢೀಕರಣ ಪತ್ರ ಮತ್ತು ಸಿ.ಡಿ. ಯನ್ನು ನೋಡುತ್ತಿದ್ದು ಅವುಗಳನ್ನು ಕ್ರಮವಾಗಿ ನಿಪಿ.14 ಮತ್ತು ಪಿ.15 ಎಂದು ಗುರುತಿಸಲಾಯಿತು.

5. ದಿಃ 08-05-2020 ರಂದು ಲಕ್ಕವಳ್ಳಿ ಪೊಲೀಸ್ ಠಾಣೆ ಯ ಸಿಬ್ಬಂದಿಗಳು ಆರೋಪಿಯನ್ನು ಬೆಳಗ್ಗೆ 11 ಗಂಟೆಗೆ ನನ್ನ ಮುಂದೆ ಹಾಜರು ಪಡಿಸಿರುತ್ತಾರೆ. ನಾನು ಅರೋಪಿಯನ್ನು ದಸ್ತಗಿರಿ ಕ್ರಮ ಅನುಸರಿಸಿ ಬಂಧಿಸಿ ಆತನನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿ ರಿಮ್ಯಾಂಡ್ ಅರ್ಜಿಯೊಂದಿಗೆ ನ್ಯಾಯಾಲಯಕ್ಕೆ ಹಾಜರು ಪಡಿಸಿರುತ್ತೇನೆ.

6. ದಿಃ 14-05-2020 ರಂದು ಪ್ರಾಸಾ.8 ರವರಿಂದ ಪ್ರಾಸಾ.1 ರವರ ಗಾಯದ ಪ್ರಮಾಣಪತ್ರವನ್ನು ಪಡೆದುಕೊಂಡಿರುತ್ತೇನೆ. ಸದರಿ ಗಾಯದ ಪ್ರಮಾಣಪತ್ರವನ್ನು ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ.10 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.10(ಬಿ) ಎಂದು ಗುರುತಿಸಲಾಯಿತು.

7. ದಿಃ 16-05-2020 ರಂದು ಚಾಸಾ.8 ರವರಿಂದ ಕೃತ್ಯ ನಡೆದ ದಿನ ಸದರಿ ಸ್ಥಳದಲ್ಲಿ ವಿದ್ಯುತ್ ಸರಬರಾಜು ಇದ್ದ ಬಗ್ಗೆ ವರದಿಯನ್ನು ಪಡೆದುಕೊಂಡಿರುತ್ತೇನೆ. ಸದರಿ ವರದಿಯನ್ನು ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ.8 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.8(ಎ) ಎಂದು ಗುರುತಿಸಲಾಯಿತು.

8. ದಿಃ 23-05-2020 ರಂದು ಘಟನಾ ಸ್ಥಳದ ನಕಾಶೆಯನ್ನು ತರೀಕೆರೆ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರವರಿಂದ ದಿಃ 22-05-2020 ರ ಪತ್ರದ ಮುಖಾಂತರ ಪಡೆದುಕೊಂಡಿರುತ್ತೇನೆ. ಸದರಿ

ಪತ್ರ ಮತ್ತು ನಕಾಶೆಯನ್ನು ನೋಡುತ್ತಿದ್ದು ಅವುಗಳನ್ನು ಕ್ರಮವಾಗಿ ನಿಪಿ.16 ಮತ್ತು ಪಿ.17 ಎಂದು, ಅವುಗಳಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.16(ಎ) ಮತ್ತು ಪಿ.17(ಎ) ಎಂದು ಗುರುತಿಸಲಾಯಿತು.

9. ದಿಃ 21-07-2020 ರಂದು ಪ್ರಾಸಾ.1, 4 ಮತ್ತು ಆರೋಪಿಯ ಜಾತಿಯ ಬಗ್ಗೆ ವರದಿಯನ್ನು ಪಡೆದುಕೊಂಡಿರುತ್ತೇನೆ. ಸದರಿ ವರದಿಯನ್ನು ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ.9 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.9(ಎ) ಎಂದು ಗುರುತಿಸಲಾಯಿತು.

10. ತನಿಖೆಯನ್ನು ಪೂರ್ಣಗೊಳಿಸಿ ತನಿಖೆಯಲ್ಲಿ ಆರೋಪಿಯ ವಿರುದ್ಧ ಆರೋಪ ಸಾಬೀತಾದ ಕಾರಣ ನ್ಯಾಯಾಲಯಕ್ಕೆ ಅವರ ವಿರುದ್ಧ ದಿನಾಂಕಃ 18-07-2020 ರಂದು ದೋಷಾರೋಪಣ ಪತ್ರವನ್ನು ಸಲ್ಲಿಸಿರುತ್ತೇನೆ.

ಪಾಟೀ ಸವಾಲು: ಆರೋಪಿಯ ಪರವಾಗಿ ಶ್ರೀ ಡಿ.ಕೆ.ಎಸ್. ವಕೀಲರಿಂದ ಶ್ರೀ ಬಿ.ಎಂ.ಎಲ್.ಜಿ. ವಕೀಲರ ಪರವಾಗಿಃ

11. ಈ ಪ್ರಕರಣದ ತನಿಖೆಯನ್ನು ನಡೆಸಲು ಚಿಕ್ಕಮಗಳೂರು ಪೊಲೀಸ್ ವರಿಷ್ಟಾಧಿಕಾರಿಗಳು ದಿಃ 07-05-2020 ರಂದು ನನಗೆ ನಿಪಿ.12 ರಂತೆ ಆದೇಶಿಸಿದ್ದಾಗಿ ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ಅದೇ ದಿನ ನಾನು ಈ ಪ್ರಕರಣದ ಕಡತವನ್ನು ಪ್ರಾಸಾ.9 ರವರಿಂದ ಪಡೆದು ಪರಿಶೀಲಿಸಿರುತ್ತೇನೆ ಎಂದು ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ.

12. ಅದೇ ದಿನ ಕೆಂಚಿಕೊಪ್ಪ ಗ್ರಾಮದ ಸರಹದ್ದಿನಲ್ಲಿ ಕೃತ್ಯ ನಡೆದಿದ್ದ ಸ್ಥಳಕ್ಕೆ ಭೇಟಿ ನೀಡಿರುತ್ತೇನೆ, ಸದರಿ ಸ್ಥಳಕ್ಕೆ ಪ್ರಾಸಾ-2 ಮತ್ತು 3 ರವರಿಗೆ ನಿಪಿ.4 ರಂತೆ ನೋಟೀಸನ್ನು ಜಾರಿ ಮಾಡಿ ಪಂಚರನ್ನಾಗಿ ಬರಮಾಡಿಕೊಂಡಿರುತ್ತೇನೆ, ಸದರಿ ಸ್ಥಳದಲ್ಲಿ ಹಾಜರಿದ್ದ ಪ್ರಾಸಾ.1 ರವರು ತೋರಿಸಿದ ಮೇರೆಗೆ ಮೇಲೆ ಹೇಳಿದ ಪಂಚರ ಸಮಕ್ಷಮ ನಿಪಿ.2 ರಂತೆ ಪಂಚನಾಮೆಯನ್ನು ಜರುಗಿಸಿರುತ್ತೇನೆ, ಸದರಿ ಪಂಚನಾಮೆಯ ಕಾಲಕ್ಕೆ

ಫ್ರಾಸಾ.1 ರವರು ಮು.ಮಾ.1 ಅಡಿಕೆ ದಬ್ಬೆಯನ್ನು ಹಾಜರುಪಡಿಸಿ ಅದನ್ನು ಆರೋಪಿತರು ಕೃತ್ಯಕ್ಕೆ ಬಳಸಿದ್ದಾಗಿ ತಿಳಿಸಿರುತ್ತಾರೆ, ಸದರಿ ದಬ್ಬೆಯನ್ನು ಮೇಲೆ ಹೇಳಿದ ಪಂಚರ ಸಮಕ್ಷಮ ಅಮಾನತುಪಡಿಸಿಕೊಂಡಿರುತ್ತೇನೆ ಎಂದು ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ಸದರಿ ಪಂಚನಾಮೆಯ ಕಾಲಕ್ಕೆ ನಿಪಿ.3 ರಂತೆ ಫೋಟೋವನ್ನು ತೆಗೆಸಿರುತ್ತೇನೆ ಎಂದು ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ಠಾಣೆಗೆ ಹಿಂತಿರುಗಿ ಮೇಲೆ ಹೇಳಿದ ಅಡಿಕೆ ದಬ್ಬೆಯನ್ನು ನಿಪಿ.13 ಮಾಲುಪಟ್ಟಿಗೆ ಅಳವಡಿಸಿಕೊಂಡು ನ್ಯಾಯಾಲಯಕ್ಕೆ ಸಲ್ಲಸಿಕೊಂಡಿರುತ್ತೇನೆ ಎಂದು ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ನಂತರ ಠಾಣೆಯಲ್ಲಿ ಫ್ರಾಸಾ-1 ರವರ ಮುಂದುವರೆದ ಹೇಳಿಕೆಯನ್ನು ಮತ್ತು ಫ್ರಾಸಾ.4 ರಿಂದ 7 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ, ಫ್ರಾಸಾ.5 ರಿಂದ 7 ರವರು ನಿಪಿ.5 ರಿಂದ ಪಿ.7 ರಂತೆ ನನ್ನ ಮುಂದೆ ಹೇಳಿಕೆಗಳನ್ನು ನೀಡಿರುತ್ತಾರೆ ಎಂದು ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ.

13. ತನಿಖಾ ಕಾಲದಲ್ಲಿ ನನ್ನ ಆದೇಶದ ಮೇರೆಗೆ ಲಕ್ಕವಳ್ಳಿ ಪೊಲೀಸ್ ಠಾಣೆ ಯ ಮುಖ್ಯ ಪೇದೆ-74 ಪುರುಷೋತ್ತಮರವರು ಇಲಾಖಾವತಿಯಿಂದ ನೀಡಲಾಗಿದ್ದ ಕ್ಯಾಮೆರದಲ್ಲಿ ಫೋಟೋಗಳನ್ನು ತೆಗೆದು ವಿಡಿಯೋವನ್ನು ಚಿತ್ರಿಕರಿಸಿರುತ್ತಾರೆ, ನಂತರ ಸದರಿಯವರು ನನ್ನ ಆದೇಶದಂತೆ ಸದರಿ ಫೋಟೋ ಮತ್ತು ವಿಡಿಯೋವನ್ನು ಕಛೇರಿಯಲ್ಲಿದ್ದ ಕಂಪ್ಯೂಟರಿಗೆ ವರ್ಗಾಯಿಸಿ ನಂತರ ಅವುಗಳನ್ನು ನಿಪಿ.15 ಡಿ.ವಿ.ಡಿ. ಗೆ ವರ್ಗಾಯಿಸಿ ನೀಡಿರುತ್ತಾರೆ ಮತ್ತು ಆ ಬಗ್ಗೆ ನಿಪಿ.14 ರಂತೆ ಭಾರತೀಯ ಸಾಕ್ಷ್ಯ ಅಧಿನಿಯಮ 65(ಬಿ) ಅಡಿಯಲ್ಲಿ ದೃಢೀಕರಣ ಪತ್ರವನ್ನು ನೀಡಿರುತ್ತಾರೆ ಎಂದು ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ.

14. ದಿಃ 08-05-2020 ರಂದು ಲಕ್ಕವಳ್ಳಿ ಪೊಲೀಸ್ ಠಾಣೆಯ ಸಿಬ್ಬಂದಿಗಳು ಆರೋಪಿಯನ್ನು ಬೆಳಗ್ಗೆ 11 ಗಂಟೆಗೆ ನನ್ನ ಮುಂದೆ ಹಾಜರು ಪಡಿಸಿರುತ್ತಾರೆ, ನಾನು ಅರೋಪಿಯನ್ನು ದಸ್ತಗಿರಿ ಕ್ರಮ

ಅನುಸರಿಸಿ ಬಂಧಿಸಿ ಆತನನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿ ರಿಮ್ಯಾಂಡ್ ಅರ್ಜಿಯೊಂದಿಗೆ ನ್ಯಾಯಾಲಯಕ್ಕೆ ಹಾಜರು ಪಡಿಸಿರುತ್ತೇನೆ ಎಂದು ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ.

15. ದಿಃ 14-05-2020 ರಂದು ಪ್ರಾಸಾ.8 ರವರಿಂದ ಪ್ರಾಸಾ.1 ರವರ ಗಾಯದ ಪ್ರಮಾಣಪತ್ರವನ್ನು ಪಡೆದುಕೊಂಡಿರುತ್ತೇನೆ ಎಂದು ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ದಿಃ 16-05-2020 ರಂದು ಚಾಸಾ.8 ರವರಿಂದ ಕೃತ್ಯ ನಡೆದ ದಿನ ಸದರಿ ಸ್ಥಳದಲ್ಲಿ ವಿದ್ಯುತ್ ಸರಬರಾಜು ಇದ್ದ ಬಗ್ಗೆ ವರದಿಯನ್ನು ಪಡೆದುಕೊಂಡಿರುತ್ತೇನೆ ಎಂದು ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ.

16. ದಿಃ 23-05-2020 ರಂದು ಘಟನಾ ಸ್ಥಳದ ನಕಾಶೆಯನ್ನು ತರೀಕೆರೆ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರವರಿಂದ ದಿಃ 22-05-2020 ರ ಪತ್ರದ ಮುಖಾಂತರ ಪಡೆದುಕೊಂಡಿರುತ್ತೇನೆ ಎಂದು ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ.

17. ದಿಃ 21-07-2020 ರಂದು ಪ್ರಾಸಾ.1, 4 ಮತ್ತು ಆರೋಪಿಯ ಜಾತಿಯ ಬಗ್ಗೆ ನಿಪಿ.9 ರಂತೆ ವರದಿಯನ್ನು ಪಡೆದುಕೊಂಡಿರುತ್ತೇನೆ ಎಂದು ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ನೀವು ಹೇಳಿದಂತೆ ಯಾವುದೇ ದಾಖಲೆಗಳನ್ನು ಸಂಬಂದಪಟ್ಟ ಅಧಿಕಾರಿಗಳಿಂದ ಪಡೆದುಕೊಂಡಿಲ್ಲ ಬದಲಿಗೆ ಅವುಗಳನ್ನು ಪ್ರಕರಣಕ್ಕೆ ಅನುಕೂಲವಾಗುವಂತೆ ಸೃಷ್ಟಿಸಿ ಹಾಜರು ಪಡಿಸಿದ್ದೇನೆ ಎಂದರೆ ಸರಿಯಲ್ಲ. ನೀವು ಹೇಳಿದಂತೆ ಯಾವುದೇ ಸ್ಥಳಕ್ಕೆ ಭೇಟಿ ನೀಡಿಲ್ಲ ಮತ್ತು ಯಾವುದೇ ಪಂಚನಾಮೆ ಮಾಡಿಲ್ಲ ಎಂದರೆ ಸರಿಯಲ್ಲ. ಆರೋಪಿಯ ವಿರುದ್ಧ ಯಾವುದೇ ಆರೋಪ ಸಾಬೀತಾಗದೇ ಇದ್ದರೂ ಸಹಾ ಅವರ ವಿರುದ್ಧ ಸುಳ್ಳು ದೋಷಾರೋಪಣ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆ ಇಲ್ಲ</u>

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯ್ತು)
ಓ.ಹೇ.ಕೇ.ಸ.ಇ.ಎ.ಒ.

ಸಹಿ/-
(ಭಾನುಮತಿ ಬಿ.ಸಿ)
1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ